# Akashvani : Bangalore
# Regional Bulletin In Kannada
# 18.03.2024 / 14.30 hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 18.03.2024 / 14.30 hrs

<><*<><>*><>

ಲೋಕಸಭಾ ಚುನಾವಣೆಗೆ ರಾಜ್ಯದಿಂದ ಬಿಜೆಪಿ, ಇದುವರೆಗೆ ೨೦ ಅಭ್ಯರ್ಥಿಗಳ ಹೆಸರುಗಳನ್ನು ಪ್ರಕಟಿಸಿದೆ. ಜೆಡಿಎಸ್ ಮಿತ್ರಪಕ್ಷಕ್ಕೆ ಮೂರು ಸ್ಥಾನಗಳನ್ನು ನೀಡಲು ಬಿಜೆಪಿ ನಿರ್ಧರಿಸಿದೆ. ಉಳಿದ ಐದು ಕ್ಷೇತ್ರಗಳಿಗೆ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಬಿರುಸಿನಿಂದ ನಡೆಯುತ್ತಿದೆ. ಮತ್ತೊಂದೆಡೆ, ಕಾಂಗ್ರೆಸ್ ಪಕ್ಷ, ಇದುವರೆಗೆ ೭ ಕ್ಷೇತ್ರಗಳಿಗೆ ತನ್ನ ಅಭ್ಯರ್ಥಿಗಳ ಹೆಸರುಗಳನ್ನು ಪ್ರಕಟಿಸಿದೆ. ಉಳಿದ ಕ್ಷೇತ್ರಗಳಿಗೆ ಅಭ್ಯರ್ಥಿಗಳ ನಿರ್ಧಾರ ಪ್ರಕ್ರಿಯೆ ಪ್ರಗತಿಯಲ್ಲಿದೆ.

<><*<><>*><>

ಲೋಕಸಭಾ ಚುನಾವಣೆ ಸಂಬಂಧ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು, ಹಲವು ಜಿಲ್ಲೆಗಳಲ್ಲಿ ಚುನಾವಣಾ ಸಿದ್ಧತೆ ಭರದಿಂದ ನಡೆಯುತ್ತಿದೆ. ಯಾದಗಿರಿ ಜಿಲ್ಲೆಯಲ್ಲಿ ನೀತಿಸಂಹಿತೆ ನಿಯಮಗಳನ್ನು ಪ್ರತಿಯೊಬ್ಬರು ಕಟ್ಟುನಿಟ್ಟಾಗಿ ಪಾಲಿಸಬೇಕು. ರಾಜಕೀಯ ಸಭೆ ಸಮಾರಂಭಗಳಿಗೆ ತಾಲೂಕು ಮಟ್ಟದಲ್ಲಿ ಸಹಾಯಕ ಚುನಾವಣಾಧಿಕಾರಿ ಕಚೇರಿಯಲ್ಲಿ ಪರವಾನಗಿ ಪಡೆಯುವುದು ಕಡ್ಡಾಯವಾಗಿದೆ. ಕುಡಿಯುವ ನೀರು, ಬರಪರಿಹಾರ ಕಾರ್ಯಗಳನ್ನು ಹೊರತುಪಡಿಸಿ, ಮತದಾರರ ಮೇಲೆ ಪ್ರಭಾವ ಬೀರುವ ಸರ್ಕಾರಿ ಯೋಜನೆಗಳನ್ನು ಸ್ಥಗಿತಗೊಳಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ.ಬಿ.ಸುಶೀಲಾ ಇಂದು ಶಾಪುರ್ ತಾಲೂಕು ಮುಡಬೂಳ ಚೆಕ್‌ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

******

ಗೋವಾ ರಾಜ್ಯದ ಗಡಿಗೆ ಹೊಂದಿಕೊಂಡಿರುವ ಉತ್ತಕನ್ನಡ ಜಿಲ್ಲೆ ಕಾರವಾರ ತಾಲೂಕು ಮಾಜಾಳಿ ಚೆಕ್‌ಪೋಸ್ಟ್‌ನಲ್ಲಿ ಕಾರ್ಯ ನಿರತ ಸಿಬ್ಬಂದಿದಿನದ ೨೪ ತಾಸು ಕಟ್ಟುನಿಟ್ಟಿನ ನಿಗಾ ಇಡಬೇಕು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನ್‌ಕರ್ ಸೂಚಿಸಿದ್ದಾರೆ. ಅವರು ಇಂದು ಈ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿದರು. ಜಿಲ್ಲೆಯಲ್ಲಿ ಚುನಾವಣಾ ಅಕ್ರಮಗಳ ಮೇಲೆ ಕಣ್ಣಿಡಲು ಒಟ್ಟು ೨೫ ಚೆಕ್‌ಪೋಸ್ಟ್‌ಗಳನ್ನು ತೆರೆಯಲಾಗಿದೆ. ರಾಷ್ಟ್ರೀಯ, ರಾಜ್ಯ ಹೆದ್ದಾರಿಗಳಲ್ಲದೇ, ಅರಣ್ಯದ ಮೂಲಕ ಕಾಲುದಾರಿಯಲ್ಲಿ

ಅಕ್ರಮ ಮದ್ಯ ಸಾಗಾಟದ ಮೇಲೂ ನಿಗಾ ಇಡುವಂತೆ ಸೂಚಿಸಲಾಗಿದೆ. ಪೊಲೀಸ್, ಅಬಕಾರಿ ಮತ್ತು ಆದಾಯ ತೆರಿಗೆ ಅಧಿಕಾರಿಗಳು ಗೋವಾ ರಾಜ್ಯದೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಸಮನ್ವಯದಿಂದ ಮಾಹಿತಿ ವಿನಿಮಯ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳ ನಾಯಕರು ತಮ್ಮ ಏಜೆಂಟ್‌ಗಳ ಮೂಲಕ ಮತದಾರರ ಪಟ್ಟಿಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕು ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಮನೋಜ್‌ಕುಮಾರ್ ಮೀನಾ ಸೂಚಿಸಿದ್ದಾರೆ. ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳು ಹಾಗೂ ಅಭ್ಯರ್ಥಿಗಳು ಅನುಸರಿಸಬೇಕಾದ ವಿಷಯಗಳನ್ನು ಕುರಿತು ವಿವರಿಸಿದ ಅವರು, ಮತದಾರರ ಪಟ್ಟಿಯಲ್ಲಿ ಹೆಸರು, ವಿಳಾಸ ಮತ್ತಿತರ ವಿವರಗಳು ಸರಿಯಾಗಿವೆಯೆ ಎಂದು ಸಾರ್ವಜನಿಕರು ಪರಿಶೀಲಿಸುವಂತೆ ರಾಜಕೀಯ ಪಕ್ಷಗಳ ಏಜೆಂಟರು ಜಾಗೃತಿ ಮೂಡಿಸಬೇಕು. ತಮ್ಮ ವ್ಯಾಪ್ತಿಯಲ್ಲಿರುವ ಮತದಾರರ ಗುರುತಿನ ಚೀಟಿಗಳಲ್ಲಿ ವ್ಯತ್ಯಾಸಗಳಿದ್ದಲ್ಲಿ ಸರಿಪಡಿಸಿಕೊಳ್ಳಲು ಇರುವ ಅವಕಾಶಗಳ ಬಗ್ಗೆ ಸೂಕ್ತ ಮಾಹಿತಿ ಒದಗಿಸಬೇಕು ಎಂದು ಅವರು ಸೂಚಿಸಿದರು. ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಸೇರಿದಂತೆ ವಿವಿಧ ಪಕ್ಷಗಳ ನಾಯಕರು ಈ ವೇಳೆ ಉಪಸ್ಥಿತರಿದ್ದರು.

<><*<><>*><>

ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದು ಮಧ್ಯಾಹ್ನ ಶಿವಮೊಗ್ಗದಲ್ಲಿ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಯುವಜನರು, ರೈತರು, ಮಹಿಳೆಯರು ಸೇರಿದಂತೆ ಎರಡೂವರೆ ಲಕ್ಷಕ್ಕೂ ಅಧಿಕ ಜನರು ಈ ಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ವಿಧಾನಪರಿಷತ್ ಮುಖ್ಯ ಸಚೇತಕ ಎನ್.ರವಿಕುಮಾರ್ ತಿಳಿಸಿದ್ದಾರೆ. ಬರಲಿರುವ ಲೋಕಸಭೆ ಚುನಾವಣೆಗೆ ಆಯ್ಕೆಯಾಗಿರುವ, ಶಿವಮೊಗ್ಗ, ದಾವಣಗೆರೆ, ಚಿತ್ರದುರ್ಗ, ಉಡುಪಿ ಮತ್ತು ಚಿಕ್ಕಮಗಳೂರಿನ ಬಿಜೆಪಿ ಅಭ್ಯರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ. ಪ್ರಧಾನಮಂತ್ರಿ ಅವರು, ಸಾರ್ವಜನಿಕರನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಅರ್ಜುನ ಪ್ರಶಸ್ತಿ ವಿಜೇತ ಪ್ಯಾರಾಆರ್ಚರ್ ಶೀತಲ್ ದೇವಿ ಅವರನ್ನು, ಕೇಂದ್ರ ಚುನಾವಣಾ ಆಯೋಗ ೨೦೨೪ರ ಸಾರ್ವತ್ರಿಕ ಚುನಾವಣೆಗೆ ತನ್ನ ರಾಯಭಾರಿಯನ್ನಾಗಿ ಘೋಷಿಸಿದೆ.

ಮತದಾನದ ಮಹತ್ವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಶೀತಲ್ ದೇವಿ, ಕೇಂದ್ರ ಚುನಾವಣಾ ಆಯೋಗದೊಂದಿಗೆ ಕೈಜೋಡಿಸಲಿದ್ದಾರೆ.

<><*<><>*><>

ಚುನಾವಣಾ ಬಾಂಡ್‌ಗಳನ್ನು ಕುರಿತಂತೆ ಸಂಪೂರ್ಣ ವಿವರಗಳನ್ನು ಪೂರ್ತಿಯಾಗಿ, ಈ ತಿಂಗಳ ೨೧ರೊಳಗೆ ಬಹಿರಂಗಪಡಿಸಬೇಕು ಎಂದು ಸ್ಟೇಟ್‌ಬ್ಯಾಂಕ್ ಆಫ್ ಇಂಡಿಯಾಗೆ ಸುಪ್ರಿಂ ಕೋರ್ಟ್ ಇಂದು ನಿರ್ದೇಶಿಸಿದೆ. ಚುನಾವಣಾ ಬಾಂಡ್‌ಗಳ ಸಂಖ್ಯೆಗಳನ್ನು ಬಹಿರಂಗಪಡಿಸಬೇಕು. ಇದರಿಂದ ಬಾಂಡ್ ಖರೀದಿಸಿದ್ದವರು ಮತ್ತು ಅವನ್ನು ಸ್ವೀಕರಿಸಿದ ರಾಜಕೀಯ ಪಕ್ಷಗಳ ವಿವರಗಳು ತಿಳಿಯುತ್ತವೆ ಎಂದು ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ನೇತೃತ್ವದ ಐವರು ನ್ಯಾಯಾಧೀಶರ ಸಂವಿಧಾನ ಪೀಠ ಸೂಚಿಸಿದೆ.

<><*<><>*><>

ಚಾಮರಾಜನಗರ ಜಿಲ್ಲೆಯಲ್ಲಿ ನಾಳೆ ನಡೆಯಬೇಕಾಗಿದ್ದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿ ಸಂಬಂಧದ ದೇಹದಾರ್ಢ್ಯ ಹಾಗೂ ದೈಹಿಕ ಸಾಮರ್ಥ್ಯ ಪರೀಕ್ಷೆಯನ್ನು ತಾಂತ್ರಿಕ ಕಾರಣಗಳಿಂದ ಮುಂದೂಡಲಾಗಿದೆ. ಪರೀಕ್ಷೆ ನಡೆಸುವ ದಿನಾಂಕವನ್ನು ನಂತರ ಪ್ರಕಟಿಸಲಾಗುವುದು ಎಂದು ಪೊಲೀಸ್ ಇಲಾಖೆಯ ಪ್ರಕಟಣೆ ತಿಳಿಸಿದೆ.

<><*<><>*><>

ಯಾದಿಗರಿ ಜಿಲ್ಲೆಯ ಹುಣಸಗಿ ತಾಲೂಕು ನಾರಾಯಣಪುರ ಗ್ರಾಮದ ಬಸವಸಾಗರ ಜಲಾಶಯದಿಂದ ರಾಯಚೂರು ಜಿಲ್ಲೆಯ ಶಾಖೋತ್ಪನ್ನ ವಿದ್ಯುತ್ ಕೇಂದ್ರಗಳ ಬಳಕೆಗಾಗಿ, ಇಂದು ಸಂಜೆಯಿಂದ ೧ ಟಿಎಂಸಿ ಅಡಿ ನೀರನ್ನು ಕೃಷ್ಣಾ ನದಿ ಪಾತ್ರಕ್ಕೆ ಹರಿಸಲಾಗುವುದು ಎಂದು ಅಣೆಕಟ್ಟು ಗೇಟ್ಸ್ ಉಪವಿಭಾಗದ ಪ್ರಭಾರ ಸಹಾಯಕ ಅಭಿಯಂತರ ವಿಜಯಕುಮಾರ್ ಅರಳಿ ತಿಳಿಸಿದ್ದಾರೆ. ಶಾಖೋತ್ಪನ್ನ ಕೇಂದ್ರದ ಅಧಿಕಾರಿಗಳ ಬೇಡಿಕೆಯಂತೆ, ವಿದ್ಯುತ್ ಉತ್ಪಾದನೆಗಾಗಿ ಬಸವಸಾಗರ ಜಲಾಶಯದಲ್ಲಿ ಕಾಯ್ದಿರಿಸಲಾಗಿರುವ ನೀರನ್ನು ಪ್ರತಿನಿತ್ಯ ಅಂದಾಜು ೧೦ ಸಾವಿರ ಕ್ಯೂಸೆಕ್ ಪ್ರಮಾಣದಲ್ಲಿ ನದೀಪಾತ್ರಕ್ಕೆ ಹರಿಬಿಡಲಾಗುತ್ತದೆ. ನದಿತೀರದ ಗ್ರಾಮಗಳ ಜನರು ಸೂಕ್ತ ಮುಂಜಾಗ್ರತೆವಹಿಸಬೇಕು. ಜಾನುವಾರುಗಳು ನದಿಗೆ ಇಳಿಯದಂತೆ ನೋಡಿಕೊಳ್ಳಬೇಕು. ನಿಗದಿತ ಪ್ರಮಾಣದ ನೀರು ಪೂರೈಕೆಯ ನಂತರ ನೀರು ಹರಿಸುವುದನ್ನು ನಿಲ್ಲಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>  ನಮ್ಮ ಮುಂದಿನ ವಾತಾ ಪ್ರಸಾರ ಸಂಜೆ ೬.೪೦ ಕ್ಕೆ<>*><>**